ಈ) ಸರ್ಕಾರ ಈ ಪ್ರಕರಣಗಳಲ್ಲಿ ಒತ್ತಡಕ್ಕೆ ಮಣಿದು ಕ್ರಮ ಕೈಗೊಳ್ಳಲು ಹಿಂಜರಿಯುತ್ತಿದೆಯೇ; ಗಣಿಗಾರಿಕೆ ನಡೆಸಲು ಅನುಮತಿ ನೀಡುವಂತೆ ನಿರ್ದೇಶಕರಿಗೆ ಯಾರಾದರೂ ಪತ್ರ ಬರೆದಿದ್ದಾರೆಯೇ (ವಿವರ ನೀಡುವುದು);

ಉ) ಸರ್ಕಾರ ಈ ಪ್ರಕರಣದಲ್ಲಿ ತಕ್ಷಣ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳುವುದೇ?

ಶ್ರೀ ಧರ್ಮಸಿಂಗ್ (ಮುಖ್ಯಮಂತ್ರಿಗಳು) :

ಅ) ಬಂದಿದೆ.

ಆ) ತೀರ್ಥಹಳ್ಳಿ ಪಟ್ಟಣದ ಹೊರ ವಲಯದ ಕುರುವಳ್ಳಿ ಹಾಗೂ ಬಲ್ಲಾಮರ ಗ್ರಾಮದಲ್ಲಿನ ಅಕ್ರಮ ಗಣಿಗಾರಿಕೆಗಳನ್ನು ತಡೆಗಟ್ಟಲು ಕ್ರಮ ಕೈಗೊಂಡಿದ್ದು, ಆಪಾದಿತರಿಂದ ರೂ. 16,500–00 ದಂಡ ವಸೂಲಿ ಮಾಡಲಾಗಿದೆ. ಅನಂತರ ಸದರಿ ಪ್ರದೇಶದಲ್ಲಿ 12 ಜನರಿಗೆ ಒಟ್ಟು 29.20 ಪ್ರದೇಶದಲ್ಲಿ ಗುತ್ತಿಗೆ ನೀಡಲಾಗಿದೆ. ಉಳಿದ ಪ್ರದೇಶಕ್ಕೆ ಸಹ ಮೂವರಿಂದ ಅರ್ಜಿ ಪಡೆದಿದ್ದು ಅದು ಪರಿಶೀಲನೆ ಹಂತದಲ್ಲಿದೆ.

ಇ) ಹೌದು, ಜಂಟಿ ಸಮೀಕ್ಷಾ ಕಾರ್ಯ ಕೈಗೊಳ್ಳಲು ಸರ್ವೆ ಇಲಾಖೆಯ ಸಹಯೋಗದೊಂದಿಗೆ ಕ್ರಮ ವಹಿಸಲಾಗುವುದು.

ಈ) ಮೇಲಿನಂತೆ ಕ್ರಮ ವಹಿಸಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಸಂಬಂಧಪಟ್ಟ ಅಧಿಕಾರಿಗಳಿಗೆ ಈಗಾಗಲೇ ಆದೇಶಿಸಿದೆ.

894(1084) ಶ್ರೀ ಅಪ್ಪಾಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣ ಶೆಟ್ಟಿ (ಬಿಜಾಪುರ): ಮಾನ್ಯ ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿಯನ್ನು ಜಾರಿಗೆ ತರಲಾಗಿದೆಯೇ; ಹಾಗಿದ್ದಲ್ಲಿ, ಯಾವಾಗಿನಿಂದ ಜಾರಿಗೆ ತರಲಾಗಿದೆ;

ಆ) ಈ ಪದ್ಧತಿಗೆ ಸಾರ್ವಜನಿಕರಿಂದ ವಿರೋಧ ವ್ಯಕ್ತವಾಗಿದೆಯೇ;

ಇ) ಹಾಗಿದ್ದಲ್ಲಿ, ಈ ಪದ್ಧತಿಯಲ್ಲಿನ ನ್ಯೂನ್ಯತೆಗಳನ್ನು ಸರಿಪಡಿಸಿ ಸರಳೀಕರಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಎಸ್. ಆರ್. ಮೋರೆ (ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು):

ಅ) ಹೌದು, 2002–2003 ಸಾಲಿನಿಂದ.

ಆ) ಬಹುತೇಕ ಸಾರ್ವಜನಿಕರು ಈ ಪದ್ಧತಿಯಂತೆ ತೆರಿಗೆ ಪಾವತಿ ಮಾಡುತ್ತಿದ್ದಾರೆ. ಕೆಲವು ತೆರಿಗೆದಾರರಿಂದ ಮಾತ್ರ ವಿರೋಧ ವ್ಯಕ್ತವಾಗಿರುತ್ತದೆ.

ಇ) ಈ ಪದ್ಧತಿಯನ್ನು ಇನ್ನಷ್ಟು ಸುಲಭಗೊಳಿಸಲು ಹಾಗೂ ಜನಪ್ರಿಯಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

896(1721) ಶ್ರೀ ಅಪ್ಪಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ(ಬಿಜಾಪುರ) : ಮಾನ್ಯ ಜಲ ಸಂಪನ್ಮೂಲ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮುಳುವಾಡ ಏತ ನೀರಾವರಿಗಾಗಿ 'ಎ' ಮತ್ತು 'ಬಿ' ಯೋಜನೆಯಡಿ ಸರ್ಕಾರ ಕೈಗೊಂಡ ಕಾಮಗಾರಿಗಳು ಯಾವುವು :